847 ಶ್ರೀ ಸೋಮಶೇಖರ್ ಎಂ ಕೆ (ಕೃಷ್ಣರಾಜ) ಮಾನ್ಯ ಮುಖ್ಯಮಂತ್ರಿಯವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಮಹಾನಗರ ಪಾಲಿಕೆಯ ಕೆಲವು ಬಡಾವಣೆಗಳಲ್ಲಿ ಆಸ್ತಿ ತೆರಿಗೆಯನ್ನು ಶೇಕಡಾ 100ಕ್ಕೂ ಅಧಿಕವಾಗಿ ಹೆಚ್ಚಿಸಿರುವ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಮೈಸೂರು ಮಹಾನಗರ ಪಾಲಿಕೆಗೆ ಆಸ್ತಿ ತೆರಿಗೆ ಪರಿಷ್ಕರಣೆ ಮಾಡಲು ಸರ್ಕಾರ ನೀಡಿರುವ ನಿರ್ದೇಶನವೇನು ,

ಇ) ಚುನಾಯಿತ ಪ್ರತಿನಿಧಿಗಳಿಲ್ಲದ ಸಮಯದಲ್ಲಿ ಮಹಾನಗರ ಪಾಲಿಕೆ ಆಸ್ತಿ ತೆರಿಗೆಯ ದರವನ್ನು ಕೌನ್ಸಿಲ್ ಸಭೆಯಲ್ಲಿ ಚರ್ಚಿಸದೆ ಜಾರಿಗೆ ತರಬಹುದೇ?

ಶ್ರೀ ಹೆಚ್ ಡಿ ಕುಮಾರಸ್ವಾಮಿ (ಮುಖ್ಯಮಂತ್ರಿಗಳು) .

ಅ) ಇಲ್ಲ

ಆ) ಕೆ ಎಂ ಸಿ ಕಾಯ್ದೆ 1976ರನ್ವಯ ಆಸ್ತಿ ತೆರಿಗೆಯನ್ನು ವಸೂಲಿ ಮಾಡಲಾಗುತ್ತಿದೆ ಅಂತೆಯೇ, ಇದರ ಆಧಾರದ ಮೇಲೆ, ಪೌರಾಡಳಿತ ನಿರ್ದೇಶಕರು ತಮ್ಮ ಸುತ್ತೋಲೆ ಸಂ ಪೌ ನಿ ಎಸ್ ಎ ಎಸ್ 56/2005–06, ದಿನಾಂಕ 2–9–2005ರಲ್ಲಿ ಆದೇಶ ನೀಡಿ, 2005–2006ನೇ ಸಾಲಿನಿಂದ ತೆರಿಗೆ ದರಗಳನ್ನು ಪರಿಷ್ಕರಿಸಿ ಜಾರಿಗೆ ತರಲು ಎಲ್ಲ ನಗರ ಸ್ಥಳೀಯ ಸಂಸ್ಥೆಗಳಿಗೆ ನಿರ್ದೇಶನ ನೀಡಲಾಗಿದೆ

ಇ) ಹೌದು

453 ಶ್ರೀ ವಾಟಾಳ್ ನಾಗರಾಜ್, ಎಂಎಲ್ಎ ಮಾನ್ಯ ಮುಖ್ಯ ಮಂತ್ರಿಯವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಂಗಳೂರು ನಗರದಲ್ಲಿ ನಾಯಿಗಳು ಮಗುವೊಂದನ್ನು ಕಚ್ಚಿ ತಿಂದು ಕೊಂದಿರುವ ದಾರುಣ ಘಟನೆಯ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು,

ಆ) ಬೆಂಗಳೂರು ನಗರವು ಸೇರಿದಂತೆ ರಾಜ್ಯದಲ್ಲಿರುವ ನಾಯಿಗಳ ಸಂಖ್ಯೆ ಎಷ್ಟು ,

ಇ) ನಾಯಿಗಳನ್ನು ನಿಯಂತ್ರಣ ಮಾಡಲು ಇರುವ ಪ್ರಾಣಿ ಜನನ ನಿಯಂತ್ರಣ ಯೋಜನೆ (ಎ ಬಿ ಸಿ) ಎಷ್ಟರ ಮಟ್ಟಿಗೆ ಯಶಸ್ವಿಯಾಗಿದೆ,

ಈ) ಈ ಯೋಜನೆಗೆ ಕಳೆದ ಮೂರು ವರ್ಷಗಳಿಂದ ನಿಗದಿಗೊಳಿಸಿದ ಮತ್ತು ಖರ್ಚು ಮಾಡಿದ ಹಣವೆಷ್ಟು,